# ಕೃಷಿ ವಿಶ್ವ ವಿದ್ಯಾನಿಲಯ
## ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
## ಜಿ.ಕೆ.ವಿ.ಕೆ., ಬೆಂಗಳೂರು–560065
### * ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 20.01.2023

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 16.01.2023 | 17.01.2023 | 18.01.2023 | 19.01.2023 | 20.01.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 28.4 | 28.4 | 28.2 | 27.4 | 26.8 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 10.0 | 9.6 | 13.4 | 14.0 | 11.4 |
| ಮೋಡ (ಪ್ರಮಾಣ) | 0 | 0 | 3 | 0 | 0 |
| ಆರ್ದ್ರತೆ 7.20 ಬೆ (ಶೇ) | 77 | 84 | 79 | 82 | 81 |
| ಆರ್ದ್ರತೆ 2.20 ಮ (ಶೇ) | 46 | 49 | 50 | 52 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6.5 | 3.1 | 3.9 | 5.7 | 4.3 |
| ಗಾಳಿಯ ದಿಕ್ಕು (ಡಿಗ್ರಿ) | 90 | 90 | 90 | 90 | 90 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 21–01–2023 ರಿಂದ 25–01–2023 ವರೆಗೆ)

| ನಿಯತಾಂಕಗಳು | 21.01.2023 | 22.01.2023 | 23.01.2023 | 24.01.2023 | 25.01.2023 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ (ಡಿ.ಸೆ. ) | 29 | 29 | 30 | 30 | 30 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 14 | 14 | 14 | 15 | 15 |
| ಮೋಡ (ಪ್ರಮಾಣ) | 2 | 2 | 1 | 2 | 2 |
| ಆರ್ದ್ರತೆ 7.20 ಬೆ (ಶೇ) | 85 | 87 | 87 | 90 | 90 |
| ಆರ್ದ್ರತೆ 2.20 ಮ (ಶೇ) | 24 | 22 | 22 | 26 | 26 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 7 | 5 | 6 | 7 | 8 |
| ಗಾಳಿಯ ದಿಕ್ಕು (ಡಿಗ್ರಿ) | 111 | 103 | 112 | 112 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ.. ದಿನದ ಗರಿಷ್ಠ ಉಷ್ಣಾಂಶ **29.0-30.0$^o$C** ಮತ್ತು ಕನಿಷ್ಠ **14.0-15.0$^o$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **85-90** % ಇದ್ದು ಮಧ್ಯಾಹ್ನ **22-26** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5-8** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | • ಹಿಂಗಾರಿನಲ್ಲಿ ಬಿತ್ತನೆಯಾದ ಬೆಳೆಗಳಿಗೆ ನೀರು ಕೊಡಬೇಕು<br>• ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಸ್ವಚ್ಚ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>• ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು.<br>• ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು. |
| ತೊಗರಿ | ಕಟಾವು | 1. ಚೆನ್ನಾಗಿ ಬಲಿತಿರುವ ತೊಗರಿ ಗಿಡಗಳನ್ನು ಕುಡುಗೋಲಿನಿಂದ ಕಟಾವು ಮಾಡಬಹುದು ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಒಕ್ಕಣೆ ಮಾಡಿ ಗೋಣಿ ಚೀಲದಲ್ಲಿ ಶೇಖರಿಸಿ |
| ರಾಗಿ | ಕಟಾವು | 1. ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಗೋಣಿ ಚೀಲದಲ್ಲಿ ಶೇಖರಿಸಿ |
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಕನಿಷ್ಠ ಉಷ್ಣಾಂಶವು 3–4 $^{o}C$ ಹಟಾತ್ ಕುಸಿತದಿಂದ ಮಾವಿನ ಹೂವಿನ ಮೇಲೆ ತುಂಬಾ ಪರಿಣಾಮ ಬಿದ್ದು ಹೂವುಗಳು ಉದುರುವುದು ಸರ್ವೇ ಸಾಮಾನ್ಯವಾಗಿದೆ. ಇದರ ಹತೋಟಿಗೆ ಪ್ಯಾಕ್ಲೋಬ್ಯುಟಜಾಲ್ ಅನ್ನು ಸಿಂಪಡಿಸಿ ಇದರಿಂದ ಎಲೆ ಚಿಗುರುವುದು ನಿಲ್ಲುತ್ತದೆ ಮತ್ತೆ ಹೊಸ ಹೂವುಗಳು ಬಿಡಲು ಪ್ರಾರಂಭವಾಗುತ್ತವೆ.<br>2. ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>3. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>4. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ.<br>5. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>6. ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು. |
| **ಪಶುಸಂಗೋಪನೆ** | | 1. **ಕಾಲುಬಾಯಿ ರೋಗ (ಗೆರಸಲು ರೋಗ)** :ಜ್ವರ ಹೆಚ್ಚಾಗಿ ಬಾಯಿಯಲ್ಲಿ ಗುಳ್ಳೆಗಳು ಕಾಣಿಸಿ, ಇವು ಒಡೆದು ನಾಲಗೆಯ ಮೇಲೆ ಗಾಯಗಳಾಗುತ್ತವೆ.<br>2. ಇದರ ಹತೋಟಿಗೆ ಮಿಶ್ರತಳಿ ದನಗಳಿಗೆ ಪ್ರತಿ ವರ್ಷ ಎರಡು ಬಾರಿ **ಜನವರಿ** ಮತ್ತು ಜುಲೈನಲ್ಲಿ ಲಸಿಕೆ ಹಾಕಿಸುವುದು.<br>3. ನರಳುವ ದನಗಳನ್ನು ಬೇರ್ಪಡಿಸುವುದು.<br>4. ಬಾಯಿ, ಗೊರಸುಗಳನ್ನು ಮತ್ತು ಉಪಕರಣಗಳನ್ನು ಅಡಿಗೆ ಸೋಡಾ ದ್ರಾವಣದಿಂದ ತೊಳೆಯಬೇಕು.<br>5. ಕೊಟ್ಟಿಗೆಯನ್ನು ಕ್ರಿಮಿನಾಶಕ ದ್ರಾವಣದಿಂದ ಶುಚಿ ಮಾಡಬೇಕು.<br>6. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕಾ** | | 1. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^{0}$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^{0}$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>2. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊರಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>3. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು |

| | |
|---|---|
| | ಮುಚ್ಚಿ ಚಳಿಯಿಂದ ರಕ್ಷಿಸಬೇಕು. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.